# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:04ನೇ ಜುಲೈ, 2023**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

## 02. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

## 04. ಗಮನ ಸೆಳೆಯುವ ಸೂಚನೆಗಳು

01. **ಡಾ|| ವೈ.ಎ. ನಾರಾಯಣಸ್ವಾಮಿ,** ಅವರು ದಿನಾಂಕ:01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೇ ಪಿಂಚಣಿ ಯೋಜನೆಯನ್ನು ಮುಂದುವರೆಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀಯುತರುಗಳಾದ ಬಿ.ಎಂ. ಫಾರೂಖ್, ಕೆ.ಎ. ತಿಪ್ಪೇಸ್ವಾಮಿ ಹಾಗೂ ಶರವಣ ಟಿ.ಎ.** ಅವರುಗಳು ಬೆಂಗಳೂರು ನಗರದ ಸುತ್ತಲೂ ಹೊರ ವರ್ತುಲ ರಸ್ತೆಯನ್ನು ನಿರ್ಮಿಸುವ ಯೋಜನೆಯ ಕಾಮಗಾರಿಯನ್ನು ತುರ್ತಾಗಿ ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦3. **ಶ್ರೀ ಎಸ್. ರವಿ** ಅವರು ಯಶವಂತಪುರ ಮಾರುಕಟ್ಟೆಯಿಂದ ಬೆಳ್ಳುಳ್ಳಿ, ಈರುಳ್ಳಿ, ಆಲೂಗೆಡ್ಡೆ ಹಾಗೂ ಶುಂಠಿ ವ್ಯಾಪಾರವನ್ನು ಪೂರ್ಣ ಪ್ರಮಾಣದಲ್ಲಿ ದಾಸನಪುರಕ್ಕೆ ಸ್ಥಳಾಂತರ ಮಾಡದಿರುವುದರಿಂದ ಸಾರ್ವಜನಿಕರು ಹಾಗೂ ವರ್ತಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀ ಮಂಜುನಾಥ ಭಂಡಾರಿ** ಅವರು ಇತ್ತೀಚೆಗೆ ಕರ್ನಾಟಕದಲ್ಲಿ ಗರ್ಭಿಣಿ ಸ್ತ್ರೀಯರು ಪ್ರಸವ ಸಂದರ್ಭದಲ್ಲಿ ಅತಿ ಹೆಚ್ಚು ಮರಣ ಪ್ರಮಾಣ ದಾಖಲಾಗಿದ್ದು, ಮಹಿಳೆ ಹಾಗೂ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಇರುವ ಯೋಜನೆಗಳ ಅನುಷ್ಠಾನದಲ್ಲಿರುವ ತೊಡಕುಗಳು ಹಾಗೂ ಪ್ರಾದೇಶಿಕ ಭಿನ್ನತೆಗಳ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಮರಿತಿಬ್ಬೇಗೌಡ** ಅವರು ಸಮಾಜ ಕಲ್ಯಾಣ ಇಲಾಖೆಯಡಿ ಕ್ರೈಸ್ಟ್ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿ.ಆರ್.ಜಿ., ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ, ಆರೋಗ್ಯ ಸೌಲಭ್ಯ ವಿಸ್ತರಣೆ ಹಾಗೂ ವಸತಿ ಶಾಲೆಗಳ ಉನ್ನತೀಕರಣ ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಸಿ.ಎನ್. ಮಂಜೇಗೌಡ** ಅವರು 2023-24ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ ಮಕ್ಕಳ ಸಮವಸ್ತ್ರ ಮತ್ತು ಪಠ್ಯ ಪುಸ್ತಕಗಳನ್ನು ವಿತರಿಸುವ ಕುರಿತು ಪ್ರಸ್ತಾಪಿಸುವುದು.

## 06. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) "2023ನೇ ಜುಲೈ, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಜಂಟಿ ಅಧಿವೇಶನವನ್ನು ಉದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಶ್ರೀ ಯು.ಬಿ. ವೆಂಕಟೇಶ್,** ಅವರು ಸೂಚಿಸುವುದು;

ಆ) **ಶ್ರೀ ಎಂ. ನಾಗರಾಜು,** ಅವರು ಅನುಮೋದಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**